ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.

ಸಂಖ್ಯೆ: ಪಪೂಶಿಇ/ಪರೀಕ್ಷೆ/ಖಾ.ಅ.ನೊ.ದಿ.ವಿ/03/2021-22 ದಿನಾಂಕ: 04/01/2022

**ಸುತ್ತೋಲೆ**

ವಿಷಯ: 2022ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಖಾಸಗಿ ಅಭ್ಯರ್ಥಿಗಳಾಗಿ ನೊಂದಾಯಿಸಿಕೊಳ್ಳುವ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

ಉಲ್ಲೇಖ: 1. ಪಪೂಶಿಇ/ಪರೀಕ್ಷೆ/ಖಾ.ಅ.ನೊ/01/2021-22 ದಿನಾಂಕ: 30-10-2021.
2. ಪಪೂಶಿಇ/ಪರೀಕ್ಷೆ/ಖಾ.ಅ.ನೊ/02/2021-22 ದಿನಾಂಕ: 24-11-2021.
3. ಪಪೂಶಿಇ/ಪರೀಕ್ಷೆ/ಖಾ.ಅ.ನೊ.ದಿ.ವಿ/2021-22 ದಿನಾಂಕ: 10/12/2021.

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಗಳನ್ವಯ 2022ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಖಾಸಗಿ ಅಭ್ಯರ್ಥಿಗಳಾಗಿ ನೊಂದಾಯಿಸಿಕೊಳ್ಳಲು ಉಲ್ಲೇಖಿತ ಸುತ್ತೋಲೆ ಸಂಖ್ಯೆ 03ರಲ್ಲಿ ದಿನಾಂಕ: 01-01-2022 ರವರೆಗೆ 500/- ರೂ ಗರಿಷ್ಠ ದಂಡಶುಲ್ಕದೊಂದಿಗೆ ಅವಕಾಶ ನೀಡಲಾಗಿತ್ತು. ಆದರೆ ಪೋಷಕರು ಹಾಗೂ ವಿದ್ಯಾರ್ಥಿಗಳ ದೂರವಾಣಿ ಕರೆ ಮತ್ತು ಮನವಿ ಪತ್ರಗಳ ಮೇರೆಗೆ ಖಾಸಗಿ ಅಭ್ಯರ್ಥಿಯಾಗಿ ನೊಂದಾಯಿಸಿಕೊಳ್ಳುವ ದಿನಾಂಕವನ್ನು ಈ ಕೆಳಕಂಡಂತೆ ವಿಸ್ತರಿಸಿ ಆದೇಶಿಸಲಾಗಿದೆ.

| ಕ್ರ.ಸಂ | ವಿವರ | ಅಭ್ಯರ್ಥಿಗಳು ಕಾಲೇಜಿಗೆ ಶುಲ್ಕ ಪಾವತಿಸಲು ದಿನಾಂಕ | ಕಾಲೇಜಿನವರು ಶುಲ್ಕವನ್ನು ಖಜಾನೆಗೆ ಸಂದಾಯ ಮಾಡುವ ದಿನಾಂಕ | ಕಾಲೇಜಿನವರು ಅರ್ಜಿಗಳನ್ನು Online ನಲ್ಲಿ ಭರ್ತಿಮಾಡಲು ಕಡೇ ದಿನಾಂಕ | ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ಅರ್ಜಿಗಳನ್ನು ಸಲ್ಲಿಸಬೇಕಾದ ದಿನಾಂಕ |
|---|---|---|---|---|---|
| 1. | ಶುಲ್ಕದ ಜೊತೆಗೆ ದಂಡಶುಲ್ಕ 500/- ರೂಗಳು ಹಾಗೂ ದಿನವೊಂದಕ್ಕೆ 70/- ರೂ ಗಳಂತೆ ಕಾರ್ಯನಿರತ 10 ದಿನಗಳಿಗೆ ಗರಿಷ್ಠ 700/- ರೂಗಳು. | 05-01-2022 ರಿಂದ 17-01-2022 | 19-01-2022 | 19-01-2022 | 21-01-2022 |

ಜಿಲ್ಲಾ ಉಪನಿರ್ದೇಶಕರು ಪ್ರಾಂಶುಪಾಲರಿಂದ ಸ್ವೀಕರಿಸಿದ ಅರ್ಜಿಗಳನ್ನು SATS PORTAL ನಲ್ಲಿ Update ಮಾಡಿರುವುದನ್ನು ಖಾತ್ರಿ ಪಡಿಸಿಕೊಂಡು Update ಮಾಡಿರುವುದಕ್ಕೆ ಸಂಬಂಧಿಸಿದಂತೆ ಮುಚ್ಚಳಿಕೆ ಪತ್ರ ಪಡೆದ ನಂತರ ಕಾಲೇಜುವಾರು ಕ್ರೋಢೀಕೃತ ವಿದ್ಯಾರ್ಥಿಗಳ ಪಟ್ಟಿ, ಶುಲ್ಕ ಪಾವತಿಸಿದ ಮೂಲ ಚಲನ್ ಹಾಗೂ ಮುಚ್ಚಳಿಕೆ ಪತ್ರವನ್ನು ಖುದ್ದಾಗಿ ಕೇಂದ್ರ ಕಛೇರಿಗೆ ಸಲ್ಲಿಸಬೇಕಾದ ದಿನಾಂಕ: 24-01-2022.

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ

**ಪ್ರತಿಗಳು:**

1. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರುಗಳು, ಪದವಿ ಪೂರ್ವ ಶಿಕ್ಷಣ ಇಲಾಖೆ.
   (ಒಂದು ಪ್ರತಿಯನ್ನು ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸುವುದು).
2. ರಾಜ್ಯದ ಎಲ್ಲಾ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರಿಗೆ.
   (ಒಂದು ಪ್ರತಿಯನ್ನು ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸುವುದು).
3. ಸಹಾಯಕ ನಿರ್ದೇಶಕರು, ಗಣಕಶಾಖೆ, ಪ.ಪೂ.ಶಿ.ಇಲಾಖೆ.
4. ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ, ಪ.ಪೂ.ಶಿ.ಇಲಾಖೆ.
   (ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು).
5. ಕಛೇರಿ ಪ್ರತಿ.

Scanned with CamScanner

ಕರ್ನಾಟಕ ಸರ್ಕಾರ

**ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.**

ಸಂಖ್ಯೆ: ಪಪೂಶಿಇ/ಪರೀಕ್ಷೆ/ವಾ.ಪ.ಪು.ಅ.ದಿ.ವಿ/02/2021-22 ದಿನಾಂಕ: 04/01/2022

**ಸುತ್ತೋಲೆ**

ವಿಷಯ: 2022ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಅನುತ್ತೀರ್ಣ ಹಾಗೂ ಫಲಿತಾಂಶ ತಿರಸ್ಕರಿಸಿದ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಸಂದಾಯ ಮಾಡಲು ಕೊನೆಯ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

ಉಲ್ಲೇಖ: 1. ಪಪೂಶಿಇ/ಪರೀಕ್ಷೆ/ವಾ.ಪ.ಪು.ಅ/2021-22 ದಿನಾಂಕ: 30-10-2021.
2. ಪಪೂಶಿಇ/ಪರೀಕ್ಷೆ/ವಾ.ಪ.ಪು.ಅ.ದಿ.ವಿ/01/2021-22 ದಿನಾಂಕ: 10/12/2021.

ಮೇಲ್ಕಂಡ ವಿಷಯ ಹಾಗೂ ಉಲ್ಲೇಖದನ್ವಯ 2022ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಅನುತ್ತೀರ್ಣ ವಿದ್ಯಾರ್ಥಿಗಳು ಹಾಗೂ ಫಲಿತಾಂಶ ತಿರಸ್ಕರಿಸಿದ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಸಂದಾಯ ಮಾಡಲು ಉಲ್ಲೇಖಿತ ಸುತ್ತೋಲೆ ಸಂಖ್ಯೆ 02ರಲ್ಲಿ 01-01-2022 ರವರೆಗೆ 500/- ರೂ ದಂಡಶುಲ್ಕದೊಂದಿಗೆ ಅವಕಾಶ ನೀಡಲಾಗಿತ್ತು. ಆದರೆ ಪೋಷಕರು ಹಾಗೂ ವಿದ್ಯಾರ್ಥಿಗಳ ದೂರವಾಣಿ ಕರೆ ಮತ್ತು ಮನವಿ ಪತ್ರಗಳ ಮೇರೆಗೆ ಸದರಿ ಪರೀಕ್ಷೆಗೆ ಶುಲ್ಕ ಪಾವತಿಸುವ ದಿನಾಂಕವನ್ನು ಈ ಕೆಳಕಂಡಂತೆ ವಿಸ್ತರಿಸಿ ಆದೇಶಿಸಲಾಗಿದೆ.

| ಕ್ರ.ಸಂ | ವಿವರ | ಅಭ್ಯರ್ಥಿಗಳು ಕಾಲೇಜಿಗೆ ಶುಲ್ಕ ಪಾವತಿಸಲು ದಿನಾಂಕ | ಕಾಲೇಜಿನವರು ಶುಲ್ಕವನ್ನು ಖಜಾನೆಗೆ ಸಂದಾಯ ಮಾಡುವ ದಿನಾಂಕ | ಕಾಲೇಜಿನವರು ಅರ್ಜಿಗಳನ್ನು Online ನಲ್ಲಿ ಭರ್ತಿಮಾಡಲು ಕಡೇ ದಿನಾಂಕ | ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ಅರ್ಜಿಗಳನ್ನು ಸಲ್ಲಿಸಬೇಕಾದ ದಿನಾಂಕ |
|---|---|---|---|---|---|
| 1. | ಶುಲ್ಕದ ಜೊತೆಗೆ ದಂಡಶುಲ್ಕ 500/- ರೂಗಳು ಹಾಗೂ ದಿನವೊಂದಕ್ಕೆ 70/- ರೂ ಗಳಂತೆ ಕಾರ್ಯನಿರತ 10 ದಿನಗಳಿಗೆ ಗರಿಷ್ಠ 700/- ರೂಗಳು. | 05-01-2022 ರಿಂದ 17-01-2022 | 19-01-2022 | 19-01-2022 | 21-01-2022 |

ಜಿಲ್ಲಾ ಉಪನಿರ್ದೇಶಕರು ಪ್ರಾಂಶುಪಾಲರಿಂದ ಸ್ವೀಕರಿಸಿದ ಅರ್ಜಿಗಳನ್ನು SATS PORTAL ನಲ್ಲಿ Update ಮಾಡಿರುವುದನ್ನು ಖಾತ್ರಿ ಪಡಿಸಿಕೊಂಡು, ಭರ್ತಿಮಾಡಿದ OMR/MCA, ಶುಲ್ಕ ಪಾವತಿಸಿದ ವಿದ್ಯಾರ್ಥಿಗಳ ಕ್ರೋಢೀಕೃತ ಪಟ್ಟಿ, ಶುಲ್ಕ ಪಾವತಿಸಿದ ಮೂಲ ಚಲನ್ ಮತ್ತು ಚೆಕ್‌ಲಿಸ್ಟ್‌ನ್ನು ಖುದ್ದಾಗಿ ಕೇಂದ್ರ ಕಛೇರಿಗೆ ಸಲ್ಲಿಸಬೇಕಾದ ದಿನಾಂಕ: 24-01-2022.

Snehal

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ

**ಪ್ರತಿಗಳು:**

1. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರುಗಳು, ಪದವಿ ಪೂರ್ವ ಶಿಕ್ಷಣ ಇಲಾಖೆ.
(ಒಂದು ಪ್ರತಿಯನ್ನು ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸುವುದು).
2. ರಾಜ್ಯದ ಎಲ್ಲಾ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರಿಗೆ.
(ಒಂದು ಪ್ರತಿಯನ್ನು ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸುವುದು).
3. ಸಹಾಯಕ ನಿರ್ದೇಶಕರು, ಗಣಕಶಾಖೆ, ಪ.ಪೂ.ಶಿ.ಇಲಾಖೆ.
4. ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ, ಪ.ಪೂ.ಶಿ.ಇಲಾಖೆ.
(ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು).
5. ಕಛೇರಿ ಪ್ರತಿ.

Scanned with CamScanner